ನಿರ್ದೇಶಕರ ಕಛೇರಿ
ಅಲ್ಪಸಂಖ್ಯಾತರ ಕಲ್ಯಾಣ
ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080– 22864212.
ಫ್ಯಾಕ್ಸ್: 080–22863618.
Email:directorgokdom@gmail.com
Web: www.gokdom.com
21ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

ಸಂಖ್ಯೆ:ಅಸಂನಿ/ಅ/ವಿದ್ಯಾಸಿರಿ/ಸಿಆರ್–44/2021–22 ದಿನಾಂಕ:01.01.2022

ಗೆ,
ಜಿಲ್ಲಾ ಅಧಿಕಾರಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
................................ ಜಿಲ್ಲೆ
................................

ಮಾನ್ಯರೆ,

ವಿಷಯ:– 2021–22ನೇ ಸಾಲಿನ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ಅರ್ಜಿಗಳನ್ನು ಸ್ವೀಕರಿಸುವ ದಿನಾಂಕವನ್ನು ವಿಸ್ತರಿಸುವ ಕುರಿತು.

ಉಲ್ಲೇಖ:– 1. ಕಛೇರಿ ಆದೇಶ ಸಂಖ್ಯೆ: ಅಸಂನಿ/ಅ/ವಿದ್ಯಾಸಿರಿ/ಸಿಆರ್–44/2021–22, ದಿ: 30.10.2021, 30.11.2021.

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ (1)ರ ಪತ್ರಗಳಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ 31.12.2021 ಎಂದು ನಿಗದಿಪಡಿಸಲಾಗಿತ್ತು. ವಿದ್ಯಾರ್ಥಿಗಳು ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿಯನ್ನು ಮಾಡಿಕೊಂಡಿರುತ್ತಾರೆ. ಆದ ಕಾರಣ ಅರ್ಜಿ ಸಲ್ಲಿಸುವ ದಿನಾಂಕವನ್ನು 10.01.2022ರ ತನಕ ವಿಸ್ತರಿಸಲಾಗಿದೆ. ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅರ್ಜಿಗಳನ್ನು ಸ್ವೀಕರಿಸಲು ತಿಳಿಸಿದೆ.

ಷರತ್ತುಗಳು:–

1. ಅರ್ಜಿಗಳನ್ನು ಕಡ್ಡಾಯವಾಗಿ ಸೇವಾಸಿಂಧು ಆನ್‌ಲೈನ್ ಮೂಲಕ ಸ್ವೀಕರಿಸತಕ್ಕದ್ದು.
2. ಈ ಪ್ರಕಟಣೆಯನ್ನು ಜಿಲ್ಲಾಮಟ್ಟದ ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರ ಪಡಿಸುವಂತೆ ಹಾಗೂ ಎಲ್ಲಾ ಸರ್ಕಾರದ ಕಛೇರಿಗಳು ಮತ್ತು ಕಾಲೇಜುಗಳ ನಾಮಫಲಕಗಳಲ್ಲಿ ಪ್ರಕಟಿಸಲು ಕ್ರಮವಹಿಸುವುದು.
3. ಒಂದು ಜಿಲ್ಲೆಯ ವಿದ್ಯಾರ್ಥಿಗಳು ಬೇರೊಂದು ಜಿಲ್ಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದು, ಸದರಿ ವಿದ್ಯಾರ್ಥಿಗಳು ಸ್ವಂತ ಜಿಲ್ಲೆಗಳಲ್ಲಿ ಅರ್ಜಿಯನ್ನು ಸಲ್ಲಿಸಿದ್ದಲ್ಲಿ, ಸದರಿ ಅರ್ಜಿಯನ್ನು ವಿದ್ಯಾರ್ಥಿಯು ವಿದ್ಯಾಭ್ಯಾಸ ಮಾಡುತ್ತಿರುವ ಜಿಲ್ಲೆಗೆ ವರ್ಗಾಯಿಸುವುದು.

ತಮ್ಮ ವಿಶ್ವಾಸಿ,

01/01/22

ನಿರ್ದೇಶಕರು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,
ಬೆಂಗಳೂರು.

ಪ್ರತಿಯನ್ನು: ನಿರ್ದೇಶಕರು, ವಿದ್ಯುನ್ಮಾನ ನಾಗರೀಕ ಸೇವಾ ವಿತರಣಾ, ನಿರ್ದೇಶನಾಲಯ, ಕಸ್ತೂರು ಬಾ ರಸ್ತೆ, ಬೆಂಗಳೂರು–01. ವಿಸ್ತರಿಸಿದ